ನಿವೃತ್ತ ನೌಕರರ ನೇಮಕ

861(357); ಡಾ॥ ರಫೀಕ್ ಅಹ್ಮದ್ ಎಸ್. (ತುಮಕೂರು ನಗರ)

ಅ) ಹೊಸದಾಗಿ ಪ್ರಾರಂಭಗೊಂಡ ವೈದ್ಯಕೀಯ ಕಾಲೇಜುಗಳಲ್ಲಿ ನಿವೃತ್ತಿ ಹೊಂದಿದ ಎಷ್ಟು ಬೋಧಕೇತರ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲಾಗಿದೆ (ಕಾಲೇಜುವಾರು ವಿವರಗಳನ್ನು ನೀಡುವುದು);

ಆ) ನಿವೃತ್ತಿ ಹೊಂದಿದ ಸಿಬ್ಬಂದಿಗಳನ್ನು ನೇಮಿಸಲು ಇರುವ ಮಾನದಂಡಗಳೇನು;

ಇ) ನಿವೃತ್ತಿ ಹೊಂದಿದ ಸಿಬ್ಬಂದಿಗಳನ್ನು ನೇಮಿಸಿರುವುದರಿಂದ ನಿರುದ್ಯೋಗಿ ಯುವಕರುಗಳಿಗೆ ಅನ್ಯಾಯವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಡಾ॥ ಶರಣಪ್ರಕಾಶ ಆರ್. ಪಾಟೀಲ್ (ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಅ) ಹೊಸದಾಗಿ ಪ್ರಾರಂಭಗೊಂಡ ವೈದ್ಯಕೀಯ ಕಾಲೇಜುಗಳಲ್ಲಿ ನಿವೃತ್ತಿ ಹೊಂದಿದ ಬೋಧಕೇತರ ಸಿಬ್ಬಂದಿಯ ವಿವರ ಈ ಕೆಳಕಂಡಂತಿದೆ.

ವೈದ್ಯಕೀಯ ಕಾಲೇಜುಗಳ ವಿವರ	ಸಿಬ್ಬಂದಿ ಸಂಖ್ಯೆ
1. ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ	05
2. ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು	04
3. ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ	02
4. ಶಿವಮೊಗ್ಗ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ	–
5. ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾವಿ	04
6. ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್	16

ಆ) ಆಯಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗಳ ಬೈಲಾದಂತೆ ಹಾಗೂ ಕರ್ನಾಟಕ ನಾಗರೀಕ ಸೇವೆಗಳ ನಿಯಮ 313ರ ರೀತಿ ತಾತ್ಕಾಲಿಕ ವ್ಯವಸ್ಥೆಯಾಗಿ (06 ತಿಂಗಳುಗಳಿಗೆ) ನೇಮಕಾತಿಯನ್ನು ಸೀಮಿತಗೊಳಿಸಿ ನಿವೃತ್ತ ಸಿಬ್ಬಂದಿಯನ್ನು ನೇಮಿಸಿಕೊಳ್ಳಲಾಗಿದೆ.

ಇ) ಇದೊಂದು ತಾತ್ಕಲಿಕ ವ್ಯವಸ್ಥೆಯಾಗಿದ್ದು ನಿಯಮಾನುಸಾರ ಖಾಯಂ ಸಿಬ್ಬಂದಿ ನೇಮಕವಾದ ನಂತರ ಇದನ್ನು ನಿಲ್ಲಿಸಲಾಗುವುದು.

ವೈದ್ಯಕೀಯ ಕೊರತೆ

862(358); ಶ್ರೀ ಡಾ॥ ರಫೀಕ್ ಅಹ್ಮದ್ ಎಸ್. (ತುಮಕೂರು ನಗರ)

ಅ) ತುಮಕೂರಿಗೆ ಈ ಹಿಂದೆ ಮಂಜೂರಾಗಿದ್ದ ಸರ್ಕಾರಿ ವೈದ್ಯಕೀಯ ಕಾಲೇಜು ರದ್ದುಗೊಂಡ ಹಿನ್ನೆಲೆಯಲ್ಲಿ ಕಾಲೇಜಿನ ಪುನರ್ ಮಂಜೂರಾತಿಗಾಗಿ ತೆಗೆದುಕೊಂಡ ಕ್ರಮಗಳೇನು;

ಆ) ಹಾಗಿದ್ದಲ್ಲಿ, ಮಂಜೂರಾತಿ ಆದೇಶ ಯಾವ ಕಾಲಮಿತಿಯಲ್ಲಿ ಹೊರಡಿಸಲಾಗುತ್ತದೆ.

ಇ) 2014–15ನೇ ಸಾಲಿಗೆ ವೈದ್ಯಕೀಯ ಮಂಡಳಿ (ದೆಹಲಿ) ಯಿಂದ ಸರ್ಕಾರಿ ವೈದ್ಯಕೀಯ ಕಾಲೇಜಿಗೆ ಶಿಫಾರಸ್ಸು ಪಡೆಯಲು ಯಾವ ಕ್ರಮಕೈಗೊಳ್ಳಲಾಗಿದೆ?

ಡಾ॥ ಶರಣಪ್ರಕಾಶ ಆರ್. ಪಾಟೀಲ್ (ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಅ) 2013–14ನೇ ಸಾಲಿನ ಪರಿಷ್ಕೃತ ಆಯವ್ಯಯದ ಘೋಷಣೆಯಂತೆ, ಚಾಮರಾಜನಗರ, ಕೊಡಗು, ಕಾರವಾರ, ಕೊಪ್ಪಳ, ಗದಗ ಮತ್ತು ಗುಲ್ಬರ್ಗಾ ಇಲ್ಲಿ ಹೊಸ 06 ವೈದ್ಯಕೀಯ ಕಾಲೇಜುಗಳನ್ನು 2014–15ನೇ ಸಾಲಿನಿಂದ 150 ಎಂ.ಬಿ.ಬಿ.ಎಸ್. ವಿದ್ಯಾರ್ಥಿಗಳ ಪ್ರವೇಶ ಸಾಮರ್ಥ್ಯದೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ.